3	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಕಿಟ್ಟ
4	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಹಿಪ್ಪರಗಾಬಾಗ
5	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಮುಡಬಿ
6	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಹಾರಕೂಡ
7	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಕೋಹಿನೂರ
8	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಮಂಟಾಳ
9	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಗದಲೇಗಾಂವ
10	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ನಾರಾಯಣಪುರ
11	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಉಜಳಂ
12	ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯ, ಬಸವಕಲ್ಯಾಣ
13	ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ, ಬಸವಕಲ್ಯಾಣ
14	ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ, ಬಸವಕಲ್ಯಾಣ

3 ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ

ಕ್ರಮ ಸಂಖ್ಯೆ	ವಿದ್ಯಾರ್ಥಿನಿಲಯಗಳ ವಿವರ
1	ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ, ಬಸವಕಲ್ಯಾಣ

604 (1054) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವಕಲ್ಯಾಣ ಮತಕ್ಷೇತ್ರದಲ್ಲಿ ಇರುವ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರ ವಿದ್ಯಾರ್ಥಿನಿಯರ ವಸತಿನಿಲಯಗಳ ಸಂಖ್ಯೆ ಎಷ್ಟು? ಇವು ಎಲ್ಲೆಲ್ಲಿವೆ?

ಆ) ಈ ಮತಕ್ಷೇತ್ರದಲ್ಲಿ ವಿದ್ಯಾರ್ಥಿನಿಯರ ವಸತಿ ನಿಲಯವನ್ನು ಪ್ರಾರಂಭಿಸಲು ಅನುಮತಿಯನ್ನು ಕೋರಿ ಅನ್ನಪೂರ್ಣೇಶ್ವರಿ ಮಹಿಳಾ ಮಂಡಳದ ವತಿಯಿಂದ ಸರ್ಕಾರಕ್ಕೆ ಮನವಿ ಬಂದಿರುವುದು ನಿಜವಲ್ಲವೇ?

ಇ) ಹಾಗಿದ್ದಲ್ಲಿ, ಸರ್ಕಾರವು ಈ ಮನವಿಯ ಮೇಲೆ ಕೈಗೊಂಡಿರುವ ಕ್ರಮಗಳೇನು?

ಈ) ಪ್ರಸಕ್ತ ಸಾಲಿನಲ್ಲಿ ಬಸವಕಲ್ಯಾಣ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಯಾವ ಯಾವ ಗ್ರಾಮಗಳಲ್ಲಿ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಯರ ವಸತಿ ನಿಲಯವನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆ?

ಶ್ರೀ ಬಾಲಚಂದ್ರ ಲ ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು)

ಅ) 1 ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಇರುವ ವಿದ್ಯಾರ್ಥಿನಿಲಯಗಳ ಸಂಖ್ಯೆ?

ಅ) ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯ, ಬಸವಕಲ್ಯಾಣ ಟೌನ್

ಆ) ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ಬಸವಕಲ್ಯಾಣ ಟೌನ್

2) ಹಿಂದುಳಿದ ವರ್ಗಗಳ ಇಲಾಖೆ ವತಿಯಿಂದ ಇರುವ ವಿದ್ಯಾರ್ಥಿನಿಲಯಗಳ ಸಂಖ್ಯೆ 2

ಅ) ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯ, ಬಸವಕಲ್ಯಾಣ ಟೌನ್

ಆ) ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ, ಬಸವಕಲ್ಯಾಣ ಟೌನ್

ಆ) ಹೌದು

ಇ) ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು, ಬೀದರ್ ಜಿಲ್ಲೆ ರವರಿಂದ ಕೆಲವು ಮಾಹಿತಿಗಳನ್ನು ಒಳಗೊಂಡಂತೆ ತನಿಖಾ ವರದಿಯನ್ನು ಸಲ್ಲಿಸಲು ಕೋರಿದ್ದು, ವರದಿ ಬಂದ ನಂತರ ವಿದ್ಯಾರ್ಥಿನಿಲಯವನ್ನು ಪ್ರಾರಂಭಿಸಲು ಅನುಮತಿ ನೀಡುವ ವಿಷಯವನ್ನು ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು

ಈ) 1 ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಬಸವಕಲ್ಯಾಣ ತಾಲ್ಲೂಕಿನ ಮುಡಬಿ ಮತ್ತು ರಾಜೇಶ್ವರ ಬಾಲಕಿಯರ ವಿದ್ಯಾರ್ಥಿನಿಲಯವನ್ನು ಪ್ರಾರಂಭಿಸುವ ಪ್ರಸ್ತಾವನೆ ಬಂದಿದೆ

2 ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯ, ಬಸವಕಲ್ಯಾಣ ಟೌನ್‌ಗೆ ಮಂಜೂರಾಗಿದೆ

605 (1055) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಖೂಬಾ ಮಾನ್ಯ ಸಮಾಜ ಕಲ್ಯಾಣ ಸಚಿವರು ಮಾನ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಸವ ಕಲ್ಯಾಣ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಇರುವ ಅಂಬೇಡ್ಕರ್ ಭವನಗಳ ಸಂಖ್ಯೆ ಎಷ್ಟು?

ಆ) ಸದರಿ ಮತಕ್ಷೇತ್ರದಲ್ಲಿ ಪ್ರಸಕ್ತ ಸಾಲಿನಲ್ಲಿ ಹೊಸದಾಗಿ ಅಂಬೇಡ್ಕರ್ ಭವನವನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ?

ಇ) ಈ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಯಾವ ಯಾವ ಗ್ರಾಮಗಳಲ್ಲಿ ಹೊಸದಾಗಿ ಅಂಬೇಡ್ಕರ್ ಭವನಗಳನ್ನು ಸ್ಥಾಪಿಸುವಂತೆ ಕೋರಿ ಸರ್ಕಾರಕ್ಕೆ ಎಷ್ಟು ಮನವಿಗಳು ಬಂದಿವೆ? (ವಿವರಗಳನ್ನು ನೀಡುವುದು)

ಈ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು?

ಶ್ರೀ ಬಾಲಚಂದ್ರ ಲ ಜಾರಕಿಹೊಳಿ (ಸಮಾಜ ಕಲ್ಯಾಣ ಸಚಿವರು)

ಅ) ಬಸವಕಲ್ಯಾಣ ಮತಕ್ಷೇತ್ರ ವ್ಯಾಪ್ತಿಯಲ್ಲಿ ಇರುವ ಅಂಬೇಡ್ಕರ್ ಭವನಗಳ ಸಂಖ್ಯೆ–3

ಆ) ಶ್ರೀ ಮಲ್ಲಿಕಾರ್ಜುನ ಸಿದ್ರಾಮಪ್ಪ ಖೂಬಾ ಮಾನ್ಯ ವಿಧಾನಸಭಾ ಸದಸ್ಯರು ಇವರಿಂದ ಪ್ರಸಕ್ತ ಸಾಲಿನಲ್ಲಿ ಹೊಸದಾಗಿ ಅಂಬೇಡ್ಕರ್ ಬವನವನ್ನು ಸ್ಥಾಪಿಸಲು ಕೋರಿರುವ ಪ್ರಸ್ತಾವನೆಯನ್ನು ಅಂಬೇಡ್ಕರ್ ಭವನಗಳ ನಿರ್ಮಾಣ ಯೋಜನೆಯು 2005–06ನೇ ಸಾಲಿನಿಂದ ಜಿಲ್ಲಾವಲಯಕ್ಕೆ ವರ್ಗಾವಣೆಕೊಂಡಿರುವುದರಿಂದ, ಜಿಲ್ಲಾ ವಲಯದಲ್ಲಿ ಪರಿಗಣಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್, ಬೀದರ್ ಜಿಲ್ಲೆ ಇವರಿಗೆ ಕಳುಹಿಸಿದೆ